ಇ) ಇಲ್ಲಾ.

ಹೊಸೂರು ರಸ್ತೆಯಲ್ಲಿರುವ ಕೈಗಾರಿಕಾ ತರಬೇತಿ ಕೇಂದ್ರ ಆವರಣದಲ್ಲಿ ಕಟ್ಟಡ ನಿರ್ಮಾಣ

1764 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹೊಸೂರು ರಸ್ತೆಯಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರದ ವಶದಲ್ಲಿರುವ ಜಾಗವೆಷ್ಟು?*

ಆ) *ಈ ಜಾಗದಲ್ಲಿ ಕೈಗಾರಿಕಾ ತರಬೇತಿ ಕೇಂದ್ರಕ್ಕಾಗಿ ಹೆಚ್ಚುವರಿ ಕಟ್ಟಡ ನಿರ್ಮಿಸಲು ಸರ್ಕಾರದವರು ಉದ್ದೇಶಿಸಿದ್ದಾರೆಯೇ?*

ಶ್ರೀ ಬಿ. ಸತ್ಯನಾರಾಯಣ (ಕಾರ್ಮಿಕ ರಾಜ್ಯ ಸಚಿವರು) :

ಅ) 19.35 ಎಕರೆಗಳು.

ಆ) ಇಲ್ಲ.

ಮನರಂಜನಾ ತೆರಿಗೆಯಿಂದ ಸರ್ಕಾರಕ್ಕೆ ಬಂದ ಆದಾಯ

1765 - ಶ್ರೀ ಎಸ್. ರಾಜೇಂದ್ರನ್ (ಕೆ.ಜಿ.ಎಫ್) : ಮಾನ್ಯ ಉಪಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮನರಂಜನಾ ತೆರಿಗೆಯಿಂದ ಕಳೆದ ಮೂರು ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ?*

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :

ಅ)

ವರ್ಷ	ತೆರಿಗೆ ಸಂಗ್ರಹಣೆ
	(ರೂ. ಕೋಟಿಗಳಲ್ಲಿ)
1995-96	45.05
1996-97	34.20
1997-98	47.75